ಕರ್ನಾಟಕ ಸರ್ಕಾರ
ಉಪ ನಿರ್ದೇಶಕರು(ಗ್ರಾಕೈ) ಕಛೇರಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಆಡಳಿತ ಸಂಕಿರ್ಣ,
ಸಿ-ಬ್ಲಾಕ್, ಕೊಠಡಿ ಸಂಖ್ಯೆ-ಸಿ-5, 2ನೇ ಮಹಡಿ ಚಿತ್ತಾಪುರ ರೋಡ್ ಯಾದಗಿರಿ - 585202

☎: 08473-253791 💻G-Mail Id: ddkviyadgir@gmail.com

ಸಂಖ್ಯೆ: ಜಿಪಂಯಾ/ಉನಿ(ಗ್ರಾಕೈ)/ಪತ್ರಿಕಾ ಪ್ರಕಟಣೆ/2026-27 ದಿನಾಂಕ: 08/07/2026

## ಪತ್ರಿಕಾ ಪ್ರಕಟಣೆ

2026-27ನೇ ಸಾಲಿನ ಜಿಲ್ಲಾ ವಲಯ ಯೋಜನೆಯ "ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆ ಯೋಜನೆ"ಯಡಿ ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ವಿದ್ಯುತ್ ಚಾಲಿತ ಹೊಲಿಗೆಯಂತ್ರ ಹಾಗೂ ವೃತ್ತಿನಿರತ ಬಡಿಗೆತನ ವೃತ್ತಿಯ ಕಸಬುದಾರರಿಗೆ ಉಚಿತವಾಗಿ ಉಪಕರಣ ವಿತರಿಸಲು ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ. ಪ್ರಯುಕ್ತ ಆಸಕ್ತರು ದಿನಾಂಕ: 10/07/2026 ರಿಂದ ದಿನಾಂಕ: 31/07/2026ರ ವರೆಗೆ ವೆಬ್ ಸೈಟ್ https://zpyadgiri.karnataka.gov.in ಮತ್ತು https://yadgir.nic.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08473-253791ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

**ಅರ್ಜಿ ಸಲ್ಲಿಸಲು ಬೇಕಾಗುವ ದಾಖಲಾತಿಗಳು:**

1) ಜನ್ಮ ದಿನಾಂಕ ನಮೂದಿಸಿರುವ ದಾಖಲೆ. ( ಅಂಕಪಟ್ಟಿ / ವರ್ಗಾವಣೆ ಪ್ರಮಾಣಪತ್ರ).
2) ಶೈಕ್ಷಣಿಕ ಅರ್ಹತೆ: ಹೊಲಿಗೆಯಂತ್ರಗಳಿಗಾಗಿ ಕನಿಷ್ಠ 8ನೇ ತರಗತಿ ಪಾಸಾಗಿರಬೇಕು ಮತ್ತು ಬಡಿಗೆತನ ಉಪಕರಣಗಳಿಗಾಗಿ ಯಾವುದೇ ಶೈಕ್ಷಣಿಕ ಅರ್ಹತೆ ಇರುವುದಿಲ್ಲ. (ವರ್ಗಾವಣೆ ಪ್ರಮಾಣಪತ್ರ/ ಅಂಕಪಟ್ಟಿ)
3) ಜಾತಿ ಪ್ರಮಾಣ ಪತ್ರ. (ಪ.ಜಾ, ಪ.ಪಂ ಮತ್ತು ಅಲ್ಪಸಂಖ್ಯಾತರವರಿಗೆ ಮಾತ್ರ)
4) ವಿಕಲಚೇತನ ಪ್ರಮಾಣ ಪತ್ರ. (ವಿಕಲಚೇತನರಾಗಿದ್ದಲ್ಲಿ)
5) ಚಾಲ್ತಿಯಲ್ಲಿರುವ ಪಡಿತರ ಚೀಟಿ ಮತ್ತು ಆಧಾರ ಗುರುತಿನ ಚೀಟಿ.
6) ಪಾಸ್ಪೋರ್ಟ್ ಗಾತ್ರದ ಭಾವಚಿತ್ರ.
7) ದೃಢೀಕೃತ ವೃತ್ತಿ ಪ್ರಮಾಣ ಪತ್ರ.

**ಷರತ್ತುಗಳು (ಸೂಚನೆಗಳು):**

1) **ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳು** ಮಾತ್ರ ಅರ್ಜಿ ಸಲ್ಲಿಸತಕ್ಕದ್ದು (ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ) ಮತ್ತು ಪಟ್ಟಣ ಪಂಚಾಯತ್, ಪುರಸಭೆ, ನಗರಸಭೆ ಹಾಗೂ ನಗರ ಪಾಲಿಕೆ / ನಗರ ಪ್ರದೇಶದ ಅಭ್ಯರ್ಥಿಗಳಿಗೆ ಅವಕಾಶವಿರುವುದಿಲ್ಲ.
2) ಸರ್ಕಾರಿ ನೌಕರರು ಅಥವಾ ಅವರ ಅವಲಂಬಿತರು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
3) ಆಯಾ ಗ್ರಾಮ ಪಂಚಾಯತಿಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರಿಂದ/ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಯವರಿಂದ ಹೊಲಿಗೆ/ ಬಡಿಗೆತನ ವೃತ್ತಿ ಮಾಡುತ್ತಿರುವ ಬಗ್ಗೆ ಧೃಢೀಕರಣ ಪ್ರಮಾಣ ಪತ್ರ.
4) ಹೊಲಿಗೆಯಂತ್ರಕ್ಕಾಗಿ ಮಹಿಳೆಯರು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಕಳೆದ 3 ವರ್ಷದಲ್ಲಿ ಈ ಇಲಾಖೆಯಿಂದ ಸಲಕರಣೆಗಳನ್ನು ಪಡೆದಿದ್ದರೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.
5) ಯಾವುದೇ ಫಲಾನುಭವಿಯು ಕೇವಲ ಒಂದು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.
6) ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಅರ್ಜಿ ಸಲ್ಲಿಸಲು ಅವಕಾಶ ಇರುತ್ತದೆ.

ಪುಟ-2ಕ್ಕೆ....

7) ಅಪ್ಲೋಡ್ ಮಾಡಿದ ಮೂಲ ದಾಖಲಾತಿಗಳು ಸ್ಪಷ್ಟವಾಗಿರಬೇಕು ಇಲ್ಲವಾದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಅದಕ್ಕೆ ತಾವೇ ಜವಬ್ದಾರರಾಗುತ್ತೀರಿ.
8) ಆಯಾ ತಾಲೂಕಿನ ಅರ್ಜಿದಾರರು ಆಯಾ ತಾಲೂಕಿನಲ್ಲಿ ಅರ್ಜಿ ಸಲ್ಲಿಸಬೇಕು ಇಲ್ಲವಾದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು.
9) ವಯಸ್ಸು: ಹೊಲಿಗೆಯಂತ್ರಗಳಿಗಾಗಿ ಕನಿಷ್ಠ 18 ವರ್ಷ ತುಂಬಿರಬೇಕು, ಗರಿಷ್ಠ 45 ವರ್ಷ ಮೀರಿರಬಾರದು ಹಾಗೂ ಬಡಿಗೆತನ ಉಪಕರಣಗಳಿಗೆ ಕನಿಷ್ಠ 18 ವರ್ಷ ತುಂಬಿರಬೇಕು, ಗರಿಷ್ಠ 55 ವರ್ಷ ಮೀರಿರಬಾರದು.
10) ಗುರಿಗಿಂತಲೂ ಹೆಚ್ಚಿನ ಅರ್ಹ ಅರ್ಜಿಗಳು ಸ್ವೀಕೃತವಾದಲ್ಲಿ ಆಯ್ಕೆ ಸಮಿತಿ ವತಿಯಿಂದ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು.
11) ಅರ್ಜಿದಾರರು ಆನ್ ಲೈನ್ ನಲ್ಲಿ ಸಲ್ಲಿಸಿದ ಅರ್ಜಿಯ ಮೂಲ ಪ್ರತಿ ಡೌನಲೋಡ್ ಮಾಡಿಕೊಂಡು ಅದನ್ನು ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಆಯ್ಕೆಯಾದ ಫಲಾನುಭವಿಗಳು ಮೂಲ ಅರ್ಜಿಯ (ಡೌನಲೋಡ್) ಪ್ರತಿಯೊಂದಿಗೆ ಅಪ್ಲೋಡ್ ಮಾಡಿದ ಇತರೆ ದಾಖಲಾತಿಗಳೊಂದಿಗೆ ಉಪಕರಣಗಳನ್ನು ಪಡೆಯುವಾಗ ಸಂಬಂಧಿಸಿದ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿ ಕಛೇರಿಗೆ ಸಲ್ಲಿಸುವುದು.

ತಮ್ಮ ವಿಶ್ವಾಸಿ,

ಉಪ ನಿರ್ದೇಶಕರು(ಗ್ರಾಕೈ), 8/7/26
ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ
ಜಿಲ್ಲಾ ಪಂಚಾಯತ್, ಯಾದಗಿರಿ